**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2019–20ನೇ ಸಾಲಿನಲ್ಲಿ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕಾಗಿ ಅನುದಾನ ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ: 1. ಆರ್ಥಿಕ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಎಫ್ ಡಿ 1 ಟಿಎಫ್ ಪಿ 2019, ದಿ: 03.04.2019.

2. ಆಂತರಿಕ ಆರ್ಥಿಕ ಸಲಹೆಗಾರರು ವಾ & ಕೈ ಇಲಾಖೆಯ ಸರ್ಕಾರದ ಆದೇಶ ಸಂ: ವಾಕೈ 57 ಆಂಆಸ(2) 2019, ದಿ: 16.04.2019.

* * * * *

**ಪ್ರಸ್ತಾವನೆ:**

2019–20ನೇ ಸಾಲಿನ ಆಯವ್ಯಯದಲ್ಲಿ ಮುಂದುವರೆದ ಯೋಜನೆಗಳೆಂದು ಘೋಷಿಸಿ ಈ ಕೆಳಕಂಡ ಯೋಜನೆಗಳಿಗೆ ಅನುದಾನವನ್ನು ಒದಗಿಸಿದ್ದು, ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ 2019–20ನೇ ಸಾಲಿನ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸಣ್ಣ ಪ್ರಮಾಣದ ಕೈಗಾರಿಕೆ ಶಾಖೆಯ ಯೋಜನೆ/ಕಾರ್ಯಕ್ರಮಗಳನ್ನು ಮುಂದುವರೆದ ಯೋಜನೆಗಳೆಂದು ಘೋಷಿಸಲಾಗಿರುತ್ತದೆ.

2019–20ನೇ ಸಾಲಿನ ಆಯವ್ಯಯದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಯೋಜನೆ/ಕಾರ್ಯಕ್ರಮಗಳಿಗೆ ಅನುದಾನವನ್ನು ಭರಿಸಲು ಆಯುಕ್ತರು, ಎಂ.ಎಸ್.ಎಂ.ಇ. ನಿರ್ದೇಶನಾಲಯ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು, ಇವರಿಗೆ ಮೊದಲನೇ ತ್ರೈಮಾಸಿಕ ಕಂತಿನಲ್ಲಿ ಅನುದಾನ ಬಿಡುಗಡೆ ಮಾಡಲು ಸರ್ಕಾರದಲ್ಲಿ ಪರಿಶೀಲಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 03 ಸಿಎಸ್ ಸಿ 2019, ದಿ: 25.04.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019–20ನೇ ಸಾಲಿನ ಮುಂದುವರೆದ ಯೋಜನೆಗಳೆಂದು ಘೋಷಿಸಲಾಗಿರುವ ಈ ಕೆಳಕಂಡ ಯೋಜನೆಗಳಿಗೆ 2019–20ನೇ ಆಯವ್ಯಯದಲ್ಲಿ

Scanned by CamScanner

ಹಂಚಿಕೆಯಾದ ಮೊತ್ತದಲ್ಲಿ ಶೇ.25ರಷ್ಟು ಮೊತ್ತ ರೂ. **1548.75** ಲಕ್ಷಗಳನ್ನು (ಸಾವಿರದ ಐದುನೂರ ನಲವತ್ತೆಂಟು ಲಕ್ಷದ ಎಪ್ಪತ್ತೈದು ಸಾವಿರಗಳು ರೂಪಾಯಿಗಳು ಮಾತ್ರ) ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಆಯುಕ್ತರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಿ ಮಂಜೂರಾತಿ ನೀಡಲಾಗಿದೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ಲೆಕ್ಕಶೀರ್ಷಿಕೆ ಮತ್ತು ಯೋಜನೆ | ಉಪ ಶೀರ್ಷಿಕೆ | **2019-20ರ** ಆಯವ್ಯಯ ಹಂಚಿಕೆ | ಮೊದಲನೇ ಮಾಸಿಕದಲ್ಲಿ ಬಿಡುಗಡೆ ಮಾಡಬೇಕಾದ ಅನುದಾನ |
|---|---|---|---|---|
| 01 | 2851-00-102-0-85<br>ಅರ್ಬನ್ ಹಾಥ್ ಸ್ಥಾಪನೆ | 102 | 20.00 | 5.00 |
| 02 | 2851-00-106-0-11<br>ನಾರು ಸಹಕಾರಿ ಸಂಘಗಳಿಗೆ ರಿಯಾಯಿತಿ ಬದಲಾಗಿ ಎಂ.ಡಿ.ಎ | 104 | 600.00 | 150.00 |
| 03 | 2851-00-102-0-74<br>ಖಾದಿ ಮತ್ತು ಸಣ್ಣ ಕೈಗಾರಿಕೆ ಉತ್ಪನ್ನಗಳ ಮೇಲಿನ ರಿಯಾಯ್ತಿ ಮತ್ತು ನೆರವು | 106 | 3054.00 | 763.50 |
| 04 | 2851-00-104-0-19<br>ಕರಕುಶಲ ಕಲೆಗೆ ಬೆಂಬಲ-ಸಹಾಯಧನ | 106 | 50.00 | 12.50 |
| 05 | 4851-00-104-0-05<br>ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ - ಬಂಡವಾಳ ಹೂಡಿಕೆ | 211 | 100.00 | 25.00 |
| 06 | 2851-00-104-0-09 | 106 | 50.00 | 12.50 |

Scanned by CamScanner

| | | | | |
|---|---|---|---|---|
| | ಕರಕುಶಲ ಕಲೆಗೆ ಬೆಂಬಲ | | | |
| **07** | **2851-00-105-0-01-ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ** | | | |
| 01 | ಸಹಾಯನುದಾನ ವೇತನ | 101 | 640.00 | 160.00 |
| 02 | ಸಹಾಯನುದಾನ ಸಾಮಾನ್ಯ | 103 | 226.00 | 56.50 |
| 03 | ಸಹಾಯನುದಾನ ಗುತ್ತಿಗೆ/ಹೊರಗುತ್ತಿಗೆ | 115 | 161.00 | 40.25 |
| 04 | ಸಹಾಯನುದಾನ -(ಪಿಂಚಣಿ) | 118 | 1294.00 | 323.50 |
| | **ಒಟ್ಟು** | | **2321.00** | **580.25** |
| | **Grand Total** | | **6195.00** | **1548.75** |

ಈ ಯೋಜನೆಗಳ ಅನುಷ್ಠಾನಕ್ಕಾಗಿ ಈಗಾಗಲೇ ಯೋಜನೆಗಳಿಗೆ ಅನ್ವಯವಾಗುವಂತೆ ರೂಪಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು. ವಿವಿಧ ಯೋಜನೆಗಳಡಿಯಲ್ಲಿ ಸಾಧಿಸಲಾದ ಭೌತಿಕ ಮತ್ತು ಆರ್ಥಿಕ ಪ್ರಗತಿಯ ವರದಿ ಮತ್ತು ಜಿಲ್ಲಾವಾರು ಫಲಾನುಭವಿಗಳ ವಿವರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಈ ವೆಚ್ಚಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1996 ಹಾಗೂ ಅದರಡಿ ರೂಪಿಸಿರುವ ನಿಯಮಾವಳಿಗಳನ್ವಯ ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶದಡಿ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಗಳಿಗಲ್ಲದೇ ಇತರೆ ಕಾರ್ಯಕ್ರಮಗಳಿಗೆ ಬಳಸತಕ್ಕದ್ದಲ್ಲ. ಹಣ ವೆಚ್ಚ ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸರ್ಕಾರಕ್ಕೆ ತಪ್ಪದೇ ಸಲ್ಲಿಸತಕ್ಕದ್ದು.

2019ರ ರಾಜ್ಯ ಚುನಾವಣೆ ನೀತಿ ಸಂಹಿತೆಯನ್ನು ಉಲ್ಲಂಘಿಸದೇ ಇರುವ ಷರತ್ತಿಗೊಳಪಟ್ಟು ಮೇಲ್ಕಂಡ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

Scanned by CamScanner

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂ: ಎಫ್ ಡಿ 1 ಟಿಎಫ್ ಪಿ 2019, ದಿನಾಂಕ: 03.04.2019ರ ಇಲಾಖಾ ಪ್ರಧಾನ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸುಮತಿ ಎಸ್.) 25.4.2019
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು–560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು–560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು–560001.
4. ಆಯುಕ್ತರು, ಎಂ.ಎಸ್.ಎಂ.ಇ., ನಿರ್ದೇಶನಾಲಯ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–01.
5. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು–01.
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು–01.
7. ಉಪ ನಿರ್ದೇಶಕರು, , ಖನಿಜ ಭವನ ರೇಸ್ ಕೋರ್ಸ್ ರಸ್ತೆ, ಬೆಂಗಳೂರು–01.
8. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1), ವಿಧಾನಸೌಧ, ಬೆಂಗಳೂರು–01.

Scanned by CamScanner

10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.
11. ಸರ್ಕಾರದ ಅಧೀನ ಕಾರ್ಯದರ್ಶಿ, (ಸಮನ್ವಯ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01(ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned by CamScanner